**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ/441/ಗ್ರಾಪಂಅ/2016 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 23-06-2016

**ಸುತ್ತೋಲೆ-2**

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ದಾಖಲೆಗಳ ಚೆಕ್‌ಲಿಸ್ಟ್‌ಗಳನ್ನು ಗ್ರಾಮ ಪಂಚಾಯತಿಗಳ ಸೂಚನಾ ಫಲಕಗಳಲ್ಲಿ ಅಳವಡಿಸುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:14-06-2013.
2) ಸರ್ಕಾರದ ಸೇರ್ಪಡೆ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:15-06-2013.
3) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:21-01-2014.
4) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:03-02-2014.
5) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 04 ಗ್ರಾಪಂಕಾ 2016 ದಿನಾಂಕ:25-02-2016.

---

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ತಿದ್ದುಪಡಿ) ನಿಯಮಗಳು, 2013 ರಲ್ಲಿ ನಿಯಮ 28 ಮತ್ತು 30 ಕ್ಕೆ ದಿನಾಂಕ:14-06-2013 ಮತ್ತು ದಿನಾಂಕ:15-06-2013 ರಲ್ಲಿ ತಿದ್ದುಪಡಿ ತರಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಈ ಕೆಳಕಂಡ ಕ್ರಮಬದ್ಧ ಆಸ್ತಿಗಳಿಗೆ ನಿಗಧಿತ ನಮೂನೆ 9 ಹಾಗೂ 11 ಎ ರಲ್ಲಿ ದಾಖಲಿಸಲು ದಿನಾಂಕ:15-06-2013 ರಿಂದ ರಾಜ್ಯದ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11 ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುತ್ತಿವೆ. ಉಲ್ಲೇಖ (5) ರ ಸರ್ಕಾರದ ಸುತ್ತೋಲೆಯಲ್ಲಿ ನಮೂನೆ-9 ಮತ್ತು ನಮೂನೆ 11ಎ ಹಾಗೂ 11ಬಿ ಗಳನ್ನು ಯಾವ ವರ್ಗದ ಆಸ್ತಿಗಳಿಗೆ ವಿತರಿಸಬೇಕು ಎಂಬುದರ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ಈ ಕೆಳಕಂಡ ದಾಖಲೆಗಳ ಚೆಕ್‌ಲಿಸ್ಟ್‌ಗಳನ್ನು ಗ್ರಾಮ ಪಂಚಾಯತಿಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಅಳವಡಿಸುವ ಬಗ್ಗೆ ಕ್ರಮ ವಹಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ತಿಳಿಸಿದೆ.

**ನಮೂನೆ 9 & 11-ಎ ಗೆ ಸಂಬಂಧಪಟ್ಟಂತೆ**

ಅ) **ಗ್ರಾಮ ಠಾಣಾ ವ್ಯಾಪ್ತಿ**

1) ಸ್ಥಳದ ಮಾಲಿಕತ್ವ ದಾಖಲೆ
2) ಗ್ರಾಮಠಾಣಾ ಸ್ಕೆಚ್.
3) ಫಾರಂ ಹೌಸ್ ಬಗ್ಗೆ ದೃಢೀಕರಣ ಪತ್ರ.
4) ಚೆಕ್ಕುಬಂಧಿ ವಿವರ.

ಆ) **ಸ್ಥಳೀಯ ಯೋಜನಾ ಪ್ರಾಧಿಕಾರ ವ್ಯಾಪ್ತಿಯ ಪ್ರದೇಶ ಮತ್ತು ಹೊರಗಿನ ಪ್ರದೇಶ(ನಿವೇಶನ ಮಾತ್ರ)**

1) ಸ್ಥಳದ ಮಾಲಿಕತ್ವ ದಾಖಲೆ/ಕ್ರಯ ಪತ್ರ

2) ಭೂ ಪರಿವರ್ತಿತ ಆದೇಶದ ಪ್ರತಿ/ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ತಹಶೀಲ್ದಾರವರ ಹಿಂಬರಹ ಪ್ರತಿ ಅಥವಾ ಜಿಲ್ಲಾಧಿಕಾರಿಯಿಂದ ಪಡೆದ ಭೂ ಪರಿವರ್ತನಾ ಆದೇಶ.
3) ಒಂದು ವೇಳೆ ಭೂಪರಿವರ್ತನೆಯಾದ ಸ್ಥಳವು ವಿಭಜನೆ ಆಗಿದ್ದಲ್ಲಿ ಸಕ್ಷಮ ಯೋಜನಾ ಪ್ರಾಧಿಕಾರದಿಂದ ಅನುಮೋದನೆಯಾದ ಬಡಾವಣೆ ನಕ್ಷೆ.
4. ಪಹಣಿ ಪತ್ರಿಕೆ (ಆರ್.ಟಿ.ಸಿ.)
5) ನಿವೇಶನದ ನಕ್ಷೆ.
5) ಮಾಲಿಕನ ವಿಳಾಸ ಗುರುತಿನ ಪತ್ರ.
6) ದೃಢೀಕೃತ ಗುರುತಿನ ಚೀಟಿ (ಭಾವಚಿತ್ರವಿರುವ)
7) ಚೆಕ್ಕುಬಂಧಿ ವಿವರ.

**ಇ) ಸ್ಥಳೀಯ ಯೋಜನಾ ಪ್ರಾಧಿಕಾರ ವ್ಯಾಪ್ತಿಯ ಪ್ರದೇಶ ಮತ್ತು ಹೊರಗಿನ ಪ್ರದೇಶ(ನಿವೇಶನ/ಪರವಾನಿಗೆ ಇರುವ ಕಟ್ಟಡ)**

1) ಸ್ಥಳದ ಮಾಲಿಕತ್ವ ದಾಖಲೆ/ಕ್ರಯ ಪತ್ರ
2) ಭೂ ಪರಿವರ್ತಿತ ಆದೇಶದ ಪ್ರತಿ/ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ತಹಶೀಲ್ದಾರವರ ಹಿಂಬರಹ ಪ್ರತಿ ಅಥವಾ ಜಿಲ್ಲಾಧಿಕಾರಿಯಿಂದ ಪಡೆದ ಭೂ ಪರಿವರ್ತನಾ ಆದೇಶ.
3) ಪಹಣಿ ಪತ್ರಿಕೆ (ಆರ್.ಟಿ.ಸಿ.)
4) ನಿವೇಶನದ ನಕ್ಷೆ
5) ಸಂಬಂಧಪಟ್ಟ ಪಂಚಾಯತಿಯಿಂದ ಪಡೆದ ಕಟ್ಟಡ ಪರವಾನಿಗೆ ಮತ್ತು ಅನುಮೋದಿತ ನಕ್ಷೆ.
6) ಕಟ್ಟಡ ತೆರಿಗೆ ರಶೀದಿ ಅಥವಾ ಸದರಿ ಕಟ್ಟಡಕ್ಕೆ ಸಂಬಂಧಪಟ್ಟ ವಿದ್ಯುಚ್ಛಕ್ತಿ ಬಿಲ್
8) ಮಾಲಿಕನ ವಿಳಾಸ ಗುರುತಿನ ಪತ್ರ.
9) ದೃಢೀಕೃತ ಗುರುತಿನ ಚೀಟಿ (ಭಾವಚಿತ್ರವಿರುವ)
10) ಚೆಕ್ಕುಬಂಧಿ ವಿವರ.

**ಈ) ನಮೂನೆ 11 (ಬಿ) ಆಸ್ತಿಗಳಿಗೆ ಸಂಬಂಧಪಟ್ಟಂತೆ**

1) ಸ್ಥಳದ ಮಾಲಿಕತ್ವ ದಾಖಲೆ/ಕ್ರಯ ಪತ್ರ
2) ಪಹಣಿ ಪತ್ರಿಕೆ (ಆರ್.ಟಿ.ಸಿ.)
3) ನಿವೇಶನದ ನಕ್ಷೆ.
4) ಕಟ್ಟಡ ತೆರಿಗೆ ರಶೀದಿ ಅಥವಾ ಸದರಿ ಕಟ್ಟಡಕ್ಕೆ ಸಂಬಂಧಪಟ್ಟ ವಿದ್ಯುಚ್ಛಕ್ತಿ ಬಿಲ್ (ಕಟ್ಟಡ ಇದ್ದರೆ ಮಾತ್ರ)
5) ಮಾಲಿಕನ ವಿಳಾಸ ಗುರುತಿನ ಪತ್ರ.
6) ದೃಢೀಕೃತ ಗುರುತಿನ ಚೀಟಿ (ಭಾವಚಿತ್ರವಿರುವ)
7) ಚೆಕ್ಕುಬಂಧಿ ವಿವರ.

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2. ಮಾನ್ಯ ಮೀನುಗಾರಿಕೆ ಮತ್ತು ಬಂದರು ಸಚಿವರ ಆಪ್ತ ಕಾರ್ಯದರ್ಶಿಯವರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
4. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.